# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2014-15ನೇ ಸಾಲಿನ ಕೇಂದ್ರ ಪುರಸ್ಕೃತ ರಾಜೀವ್ ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ್ (ಆರ್.ಜಿ.ಪಿ.ಎಸ್.ಎ) ಯೋಜನೆಯಡಿ ಪ್ರತಿ ಜಿಲ್ಲಾ ಪಂಚಾಯತಿ ವ್ಯಾಪ್ತಿಯಲ್ಲಿ ಜಿಲ್ಲಾ ಸಂಪನ್ಮೂಲ ಕೇಂದ್ರ ಸ್ಥಾಪನೆಗೆ ಅನುದಾನ ಬಿಡುಗಡೆ ಮಾಡುವ ಕುರಿತು.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 139 ಜಿಪಸ 2012(ಪಿ-3) ದಿನಾಂಕ:29.07.2013
2. ಭಾರತ ಸರ್ಕಾರದ ಪಂಚಾಯತ್ ರಾಜ್ ಮಂತ್ರಾಲಯ, ನವದೆಹಲಿರವರ ಆದೇಶ ಸಂಖ್ಯೆ :ಕೆ-11011/02/2014-DPE RGPSA [(I)24-09-2014)] ಮತ್ತು (II), (III),(IV),(V) &(VI)] ದಿನಾಂಕ: 26.09.2014.
3. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 182 ಜಿಪಸ 2014(ಪಿ-2) ದಿನಾಂಕ:14.11.2014
4. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 182 ಜಿಪಸ 2014 ದಿನಾಂಕ:22.11.2014
5. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 139 ಜಿಪಸ 2012 ದಿನಾಂಕ:26.02.2014
6. ಸರ್ಕಾದ ಆದೇಶ ಸಂಖ್ಯೆ: ಗ್ರಾಅಪ 139 ಜಿಪಸ 2012(ಪಿ-3) ದಿನಾಂಕ:18.07.2014
7. ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಹಾಗೂ ಅಭಿವೃದ್ಧಿ ನಿಗಮದ ಪತ್ರ ಸಂಖ್ಯೆ:ಕೆಆರ್‌ಐಡಿಎಲ್/ಕಾಮಗಾರಿ/ಜಿಪಸ/2014-15 ದಿನಾಂಕ:17.11.2014

**ಪ್ರಸ್ತಾವನೆ:**

ಭಾರತ ಸರ್ಕಾರದ ಪಂಚಾಯತ್ ರಾಜ್ ಮಂತ್ರಾಲಯವು ರಾಷ್ಟ್ರದಾದ್ಯಂತ ಅನುಷ್ಠಾನಗೊಳಿಸುತ್ತಿರುವ e-PANCHAYAT, ಪಂಚಾಯತ್ ಎಂಪವರ್‌ಮೆಂಟ್ ಅಂಡ್ ಅಕೌಂಟಬಿಲಿಟಿ ಇನ್ಸೆಂಟೀವ್ ಸ್ಕೀಮ್ (PEAIS), ಪಂಚಾಯತ್ ಮಹಿಳಾ ಏವಂ ಯುವಶಕ್ತಿ ಅಭಿಯಾನ (PMEYSA) ಹಾಗೂ ಬ್ಯಾಕ್‌ವರ್ಡ್ ರೀಜನ್ಸ್ ಗ್ರಾಂಟ್ ಫಂಡ್ (BRGF) ಯೋಜನೆಗಳಲ್ಲಿ ಅಳವಡಿಸಿಕೊಳ್ಳಲಾಗಿದ್ದ ಸಾಮರ್ಥ್ಯಾಭಿವೃದ್ಧಿ ಹಾಗೂ ತರಬೇತಿ ಕಾರ್ಯಕ್ರಮಗಳನ್ನು ಸಮ್ಮಿಳನಗೊಳಿಸಿ, ಪಂಚಾಯತ್ ರಾಜ್ ಸಂಸ್ಥೆಗಳನ್ನು ಹಾಗೂ ಅದರಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪಂಚಾಯತ್ ರಾಜ್ ಚುನಾಯಿತ ಪ್ರತಿನಿಧಿಗಳು ಹಾಗೂ ಅಧಿಕಾರಿಗಳಿಗೆ ಸಾಮರ್ಥ್ಯಾಭಿವೃದ್ಧಿಯನ್ನು ಬಲಪಡಿಸುವ ಉದ್ದೇಶದಿಂದ 2012-13ನೇ ಸಾಲಿನಿಂದ ನೂತನ ಯೋಜನೆ, ರಾಜೀವ್ ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ್(ಆರ್.ಜಿ.ಪಿ.ಎಸ್.ಎ) ಯೋಜನೆಯನ್ನು ಕೇಂದ್ರ ಸರ್ಕಾರವು ಜಾರಿಗೊಳಿಸಿದೆ.

ಮೇಲೆ ಓದಲಾದ ಉಲ್ಲೇಖ(1)ರಲ್ಲಿನ ಸರ್ಕಾರದ ಆದೇಶದಲ್ಲಿ ಈ ಯೋಜನೆಯನ್ನು ರಾಜ್ಯದಲ್ಲಿ ಅನುಷ್ಠಾನಗೊಳಿಸಲು ಆದೇಶಿಸಲಾಗಿದೆ. ಈ ಆದೇಶದ ಅನ್ವಯ ಯೋಜನಾ ವೆಚ್ಚವನ್ನು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು 75:25ರ ಪ್ರಮಾಣದಲ್ಲಿ ಭರಿಸಬೇಕಾಗಿದೆ. 2014-15ನೇ ಸಾಲಿಗೆ ಕೇಂದ್ರ ಸರ್ಕಾರವು ತನ್ನ ಪಾಲಿನ ಅನುದಾನದ ಮೊತ್ತವನ್ನು ಮೇಲೆ ಓದಲಾದ ಉಲ್ಲೇಖ(2)ರ ಪತ್ರಗಳಲ್ಲಿ ರಾಜ್ಯ ಸರ್ಕಾರಕ್ಕೆ ವಿವಿಧ ಚಟುವಟಿಕೆಗಳಿಗಾಗಿ ಅನುದಾನವನ್ನು ಬಿಡುಗಡೆಗೊಳಿಸಿದೆ.

2014-15ನೇ ಸಾಲಿಗೆ ಯೋಜನೆಯ ಒಟ್ಟಾರೆ ವೆಚ್ಚದ ಮೊತ್ತ 16009.76 ಲಕ್ಷಗಳಾಗಿದ್ದು, ಇದರಲ್ಲಿ ಕೇಂದ್ರದ ಪಾಲು 12007.32ಲಕ್ಷ ಹಾಗೂ ರಾಜ್ಯದ ಪಾಲು 4002.44ಲಕ್ಷ ರೂ.ಗಳಾಗಿರುತ್ತದೆ. ಕೇಂದ್ರ ಪಾಲಿನ ಮೊದಲನೆಯ ಕಂತಿನ ಅನುದಾನದ ಮೊತ್ತ 6003.66 ಲಕ್ಷ ರೂ.ಗಳಲ್ಲಿ ರಾಜ್ಯ ಸರ್ಕಾರಕ್ಕೆ 4680.61 ಲಕ್ಷ ರೂ.ಗಳನ್ನು ಬಿಡುಗಡೆಗೊಳಿಸಿರುತ್ತದೆ. ಪ್ರಸ್ತುತ ಕೇಂದ್ರದ ಪಾಲಿನ ವಂತಿಗೆಯನ್ನು, ವರ್ಗೇತರ (NON-SC ಮತ್ತು ST) ಯೋಜನೆ, ವಿಶೇಷ ಘಟಕ (SC) ಯೋಜನೆ ಮತ್ತು ವಿಶೇಷ ಗಿರಿಜನ (ST) ಯೋಜನೆಗಳಿಗಾಗಿ 2014-15ನೇ ಸಾಲಿನ ಕೇಂದ್ರ ಸರ್ಕಾರವು ಕರ್ನಾಟಕ ರಾಜ್ಯಕ್ಕೆ ನೀಡಲು ನಿರ್ಧರಿಸಿ ಅನುಕ್ರಮವಾಗಿ ರೂ. 33,23,23,310/-, ರೂ.9,36,12,200/- ಮತ್ತು ರೂ.4,21,25,490/- ಒಟ್ಟಾರೆ ರೂ.46,80,61,000/- ಗಳನ್ನು ಬಿಡುಗಡೆಗೊಳಿಸಿದ್ದು, ರಾಜ್ಯದ ಆರ್ಥಿಕ ಇಲಾಖೆಯು ಉಲ್ಲೇಖ(3)ರ ಮೂಲಕ ಜಮಾ ದೃಢೀಕರಣ ಪತ್ರವನ್ನು ನೀಡಿರುತ್ತದೆ ಹಾಗೂ

ರಾಜೀವ್ ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ್(ಆರ್.ಜಿ.ಪಿ.ಎಸ್.ಎ) ಯೋಜನೆ ಅನುದಾನದ ಲೆಕ್ಕಶೀರ್ಷಿಕೆ 2515-00-101-0-31 (ಯೋಜನೆ)ರಡಿ ಸ್ವೀಕೃತಗೊಂಡಿರುತ್ತದೆ.

ಉಲ್ಲೇಖ(4)ರ ಮೂಲಕ ಕೇಂದ್ರ ಸರ್ಕಾರದಿಂದ ಈ ಯೋಜನೆಯ ಉದ್ದೇಶಕ್ಕಾಗಿ ಮೊದಲನೆಯ ಕಂತಿನ ಬಾಬ್ತಿನ ಮೊತ್ತ ರೂ. 46,80,61,000/- ಗಳನ್ನು ರಾಜೀವ್ ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ್(ಆರ್.ಜಿ.ಪಿ.ಎಸ್.ಎ) ಯೋಜನೆ ಅನುದಾನದ ಲೆಕ್ಕಶೀರ್ಷಿಕೆ 2515-00-101-0-31 (ಯೋಜನೆ)ರಡಿಯಿಂದ ಬಿಡುಗಡೆಗೊಳಿಸಲಾಗಿದೆ. ಈ ಅನುದಾನಕ್ಕೆ ಸಮವರ್ತಿಯಾಗಿ ರಾಜ್ಯ ಸರ್ಕಾರದ ಪಾಲಿನ ಶೇಕಡಾ 25ರಷ್ಟರ ಮೊತ್ತ ರೂ.15,60,20,000/-ಗಳನ್ನು ಬಿಡುಗಡೆಗೊಳಿಸಿದೆ. ಈ ಯೋಜನೆಯ ಉದ್ದೇಶಕ್ಕಾಗಿ ರಾಜ್ಯ ಮತ್ತು ಕೇಂದ್ರ ಸರ್ಕಾರದ ಅನುದಾನಗಳ ಒಟ್ಟಾರೆ ಮೊತ್ತ ರೂ. 62,40,81,000/-ಗಳಾಗಿರುತ್ತದೆ.

ಪಂಚಾಯತಿ ರಾಜ್ ವ್ಯವಸ್ಥೆಯು ಸದೃಢ ಹಾಗೂ ಸಬಲೀಕರಣಕ್ಕಾಗಿ ಚುನಾಯಿತ ಪ್ರತಿನಿಧಿಗಳಿಗೆ ಸ್ಥಳೀಯ ಅವಶ್ಯಕತೆ, ಮೂಲಭೂತ ಸೌಲಭ್ಯ ಮತ್ತು ಅಭಿವೃದ್ಧಿ ವಿಷಯಗಳಿಗೆ ಸಂಬಂಧಿಸಿದಂತೆ ವಿಚಾರಧಾರೆಗಳನ್ನು ವೃದ್ಧಿಸುವುದು ಹಾಗೂ ಸಾಂಸ್ಥಿಕವಾಗಿ ಆಡಳಿತದಲ್ಲಿ ಭಾಗವಹಿಸಲು ಸಾಮರ್ಥ್ಯಾಭಿವೃದ್ಧಿ ತರಬೇತಿಯನ್ನು ನೀಡುವುದು ಅತ್ಯವಶ್ಯಕವಾಗಿದೆ. ಸ್ಥಳೀಯವಾಗಿ ತರಬೇತಿ ನೀಡುವ ಹಾಗೂ ಗ್ರಾಮೀಣಾಭಿವೃದ್ಧಿಗೆ ಪೂರಕವಾಗಿರುವ ಸಂಶೋಧನೆಗಳನ್ನು ನಡೆಸುವ ಉದ್ದೇಶದಿಂದ ಪ್ರತಿ ಜಿಲ್ಲಾ ಪಂಚಾಯತಿ ಕೇಂದ್ರದಲ್ಲಿ ಜಿಲ್ಲಾ ಪಂಚಾಯತಿ ಸಂಪನ್ಮೂಲ ಕೇಂದ್ರವನ್ನು "ರಾಜೀವ್ ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ್ (ಆರ್.ಜಿ.ಪಿ.ಎಸ್.ಎ) ಯೋಜನೆ"ಯಡಿ ಸ್ಥಾಪಿಸಲು ಉದ್ದೇಶಿಸಲಾಗಿದೆ. ಮೇಲೆ ಓದಲಾದ ಉಲ್ಲೇಖ(5) & (6)ರ ಆದೇಶಗಳ ಪ್ರಕಾರ ಈಗಾಗಲೇ ರಾಜ್ಯದ 16 ಜಿಲ್ಲಾ ಪಂಚಾಯತಿಗಳಿಗೆ, ಜಿಲ್ಲಾ ಪಂಚಾಯತಿ ಸಂಪನ್ಮೂಲ ಕೇಂದ್ರ ಸ್ಥಾಪನೆ ಉದ್ದೇಶಕ್ಕಾಗಿ ಒಂದನೇ ಕಂತಿನ ಅನುದಾನ ಬಾಬ್ತು ಪ್ರತಿ ಜಿಲ್ಲಾ ಪಂಚಾಯತಿಗೆ ರೂ.50.00ಲಕ್ಷಗಳಂತೆ 16 ಜಿಲ್ಲಾ ಪಂಚಾಯತಿಗಳಿಗೆ ಒಟ್ಟಾರೆ ರೂ.8.00ಕೋಟಿಗಳನ್ನು ಕರ್ನಾಟಕ ಸರ್ಕಾರ ಸ್ವಾಮ್ಯದ "ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಹಾಗೂ ಅಭಿವೃದ್ಧಿ ನಿಗಮ"ಕ್ಕೆ ಬಿಡುಗಡೆ ಮಾಡಲಾಗಿದೆ.

ಉಲ್ಲೇಖ(7)ರ ಪತ್ರದಲ್ಲಿ 18 ಜಿಲ್ಲಾ ಪಂಚಾಯತಿ ಸಂಪನ್ಮೂಲ ಕೇಂದ್ರಗಳ ಕಟ್ಟಡದ ಮುಂದುವರೆದ ಕಾಮಗಾರಿಗಳಿಗಾಗಿ ರೂ.19.00 ಕೋಟಿಗಳನ್ನು ಬಿಡುಗಡೆಗೊಳಿಸುವಂತೆ "ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಹಾಗೂ ಅಭಿವೃದ್ಧಿ ನಿಗಮ"ವು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತದೆ. ಪ್ರಸ್ತಾವನೆಯನ್ನು ಪರಿಶೀಲಿಸಲಾಗಿದೆ. ಅನುಬಂಧದಲ್ಲಿ ಲಗತ್ತಿಸಿರುವ ಜಿಲ್ಲಾ ಸಂಪನ್ಮೂಲ ಕೇಂದ್ರದ ಕಟ್ಟಡಗಳ ಮುಂದುವರಿದ ಕಾಮಗಾರಿಗಳಿಗಾಗಿ 2014-15ನೇ ಸಾಲಿನಲ್ಲಿ ಒಟ್ಟಾರೆ ರೂ.15.00ಕೋಟಿಗಳನ್ನು ಬಿಡುಗಡೆ ಮಾಡಲು ನಿರ್ಧರಿಸಿದೆ. ಅದಕ್ಕಾಗಿ ಈ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 182 ಜಿಪಸ 2014(ಪಿ-2), ಬೆಂಗಳೂರು, ದಿನಾಂಕ: 27-11-2014.</u>**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವ ಎಲ್ಲಾ ಅಂಶಗಳನ್ನು ಗಣನೆಗೆ ತೆಗೆದುಕೊಂಡು, "ರಾಜೀವ್‌ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ್(ಆರ್.ಜಿ.ಪಿ.ಎಸ್.ಎ)ಯೋಜನೆಯಡಿ "ಪಂಚಾಯತ್ ರಾಜ್ ಚುನಾಯಿತ ಪ್ರತಿನಿಧಿಗಳ ಸಾಮರ್ಥ್ಯಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವ್ಯವಸ್ಥೆಯ ಅನುಷ್ಠಾನಾಧಿಕಾರಿಗಳಿಗೆ ಪುನಶ್ಚೇತನ ತರಬೇತಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತಿ ರಾಜ್ ವ್ಯವಸ್ಥೆಯ ಸದೃಢೀಕರಣ ಸಂಬಂಧದ ಕಾರ್ಯಾಗಾರ ಮತ್ತು ಸಂಪರ್ಕ ಸಭೆಗಳನ್ನು ನಡೆಸಲು ಕೆಳಕಂಡ ಜಿಲ್ಲಾ ಪಂಚಾಯತಿ ಕೇಂದ್ರದ ವ್ಯಾಪ್ತಿಯಲ್ಲಿ ಜಿಲ್ಲಾ ಪಂಚಾಯತಿ ಸಂಪನ್ಮೂಲ ಕೇಂದ್ರವನ್ನು ನಿರ್ಮಿಸಲು ಕರ್ನಾಟಕ ಸರ್ಕಾರ ಸ್ವಾಮ್ಯದ "ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಹಾಗೂ ಅಭಿವೃದ್ಧಿ ನಿಗಮ" ರವರಿಗೆ 2014-15ನೇ ಸಾಲಿನಲ್ಲಿ ರೂ.15.00(ಹದಿನೈದು ಕೋಟಿ

ರೂಪಾಯಿಗಳು ಮಾತ್ರ) ಕೋಟಿಗಳನ್ನು ಬೆಂಗಳೂರಿನ ದೇನಾ ಬ್ಯಾಂಕ್, ಇಂದಿರಾನಗರದ ಶಾಖೆಯಲ್ಲಿ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಇಲಾಖೆಯ "ರಾಜೀವ್‌ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ್(ಆರ್.ಜಿ.ಪಿ.ಎಸ್.ಎ)ಯೋಜನೆಯ ಹೆಸರಿನಲ್ಲಿರುವ ಉಳಿತಾಯ ಖಾತೆ ಸಂಖ್ಯೆ 052110026480 ಯಿಂದ ಅನುದಾನವನ್ನು ಬಿಡುಗಡೆಗೊಳಿಸಲು ಆದೇಶಿಸಿದೆ. ಈ ಅನುದಾನವನ್ನು "ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಹಾಗೂ ಅಭಿವೃದ್ಧಿ ನಿಗಮ"ದ ಕಾರ್ಪೋರೇಶನ್ ಬ್ಯಾಂಕ್, ಎಸ್.ಸಿ. ರಸ್ತೆ ಶಾಖೆಯಲ್ಲಿನ ಉಳಿತಾಯ ಖಾತೆ ಸಂಖ್ಯೆ 014401601000499(IFSC Code CORP0000144)ಗೆ ಆನ್‌ಲೈನ್ ಮೂಲಕ ವರ್ಗಾಯಿಸುವುದು. ಬಿಡುಗಡೆ ಮಾಡಿರುವ ಹದಿನೈದು ಕೋಟಿ ರೂ.ಗಳನ್ನು ಅನುಬಂಧದಲ್ಲಿ ನಮೂದಿಸಿರುವ ಜಿಲ್ಲಾ ಪಂಚಾಯತಿ ಸಂಪನ್ಮೂಲ ಕೇಂದ್ರದ ಕಟ್ಟಡದ ಕಾಮಗಾರಿಗಳಿಗೆ ನಿಗಧಿಗೊಳಿಸಿರುವ ಮೊತ್ತವನ್ನು ವಿನಿಯೋಗಿಸುವಂತೆ ಆದೇಶಿಸಿದೆ.

<u>ಅನುದಾನದ ವಿನಿಯೋಗವು ಈ ಕೆಳಕಂಡ ನಿಬಂಧನೆಗಳಿಗೆ ಒಳಪಟ್ಟಿರುತ್ತದೆ.</u>

1. ಅನುದಾನವನ್ನು ಯಾವ ಉದ್ದೇಶಗಳಿಗಾಗಿ ಬಿಡುಗಡೆಗೊಳಿಸಲಾಗಿದೆಯೋ, ಅದೇ ಉದ್ದೇಶಗಳಿಗೆ ಮಾತ್ರ ವಿನಿಯೋಗಿಸುವುದು.

2. ಕಟ್ಟಡದ ವಾಸ್ತು ವಿನ್ಯಾಸವು ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆ, ಮೈಸೂರು ಇವರ ಸಲಹೆಯಂತೆ ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಹಾಗೂ ಅಭಿವೃದ್ಧಿ ನಿಗಮವು ಸಿದ್ಧಪಡಿಸಿರುವ ಮಾದರಿಯಲ್ಲಿರಬೇಕು.

3. ಕಾಲಮಿತಿಯಲ್ಲಿ ಕಟ್ಟಡವನ್ನು ನಿರ್ಮಿಸಬೇಕು.

4. Non-Duplication, Non-Diversion ಮತ್ತು Non-Embezzlement ಪ್ರಮಾಣ ಪತ್ರಗಳನ್ನು ಸಲ್ಲಿಸುವುದು.

5. ರಾಜೀವ್ ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ್ (ಆರ್.ಜಿ.ಪಿ.ಎಸ್.ಎ) ಯೋಜನೆಯ ಕೇಂದ್ರ ಸರ್ಕಾರ ಪ್ರಾಯೋಜಿತ ತೃತೀಯ ಮಧ್ಯವರ್ತಿ(Third Party Evaluation)ಗಳಿಂದ ಎಲ್ಲಾ ತರಬೇತಿ ಕಾರ್ಯಕ್ರಮಗಳನ್ನು ಪರಿವೀಕ್ಷಿಸಲು ಹಾಗೂ ಮೌಲ್ಯಮಾಪನ ಮಾಡಲು ಆಗಮಿಸುವರು.

ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ/03/ಟಿಎಫ್‌ಪಿ/2014, ದಿನಾಂಕ: 04-04-2014 ಹಾಗೂ ಆದೇಶ ಸಂಖ್ಯೆ: ಎಫ್‌ಡಿ/05/ಟಿಎಫ್‌ಪಿ/2014, ದಿನಾಂಕ: 14-10-2014 ರಲ್ಲಿ ಆಡಳಿತ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿದ ಅಧಿಕಾರದನ್ವಯ ಅಧಿಕಾರದನ್ವಯ ಈ ಆದೇಶವನ್ನು ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಸ್.ಎನ್.ಕಲಾವತಿ)
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ,**

1.ಮಹಾಲೇಖಪಾಲರು (ಎ ಅಂಡ್ ಇ), ಕರ್ನಾಟಕ, ಬೆಂಗಳೂರು.
2.ಪ್ರಧಾನ ಮಹಾಲೇಖಪಾಲರು (ಜಿ ಅಂಡ್ ಎಸ್ ಎಸ್ ಎ), ಕರ್ನಾಟಕ, ಬೆಂಗಳೂರು.
3.ಪ್ರಧಾನ ಮಹಾಲೇಖಪಾಲರು (ಇ ಅಂಡ್ ಆರ್ ಎಸ್ ಎ), ಕರ್ನಾಟಕ, ಬೆಂಗಳೂರು.

ಕೊಡಗು, ಬೆಂಗಳೂರು ನಗರ, ಕೋಲಾರ, ಮೈಸೂರು, ಉಡುಪಿ, ಚಾಮರಾಜನಗರ, ಗದಗ, ಉತ್ತರಕನ್ನಡ ಕಲಬುರ್ಗಿ(ಗುಲ್ಬರ್ಗಾ), ಬೆಳಗಾವಿ, ಚಿಕ್ಕಬಳ್ಳಾಪುರ, ದ.ಕನ್ನಡ, ಹಾವೇರಿ, ರಾಮನಗರ, ಬಿಜಾಪುರ ಬಾಗಲಕೋಟೆ ಶಿವಮೊಗ್ಗ, ದಾವಣಗೆರೆ ಚಿತ್ರದುರ್ಗ

4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಬೀದರ, ಯಾದಗಿರಿ, ಚಿಕ್ಕಮಗಳೂರು ಮತ್ತು ಬಳ್ಳಾರಿ
5. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಹಾಗೂ ಅಭಿವೃದ್ಧಿ ನಿಗಮ, ಗ್ರಾಮೀಣಾಭಿವೃದ್ಧಿ ಭವನ, ಆನಂದರಾವ್ ಸರ್ಕಲ್, ಬೆಂಗಳೂರು.
6. ಇಲಾಖಾ ವೆಬ್‌ಸೈಟ್ / ಕರ್ನಾಟಕ ವಿಕಾಸ ಮಾಸ ಪತ್ರಿಕೆ.
7. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.

**ಪ್ರತಿಯನ್ನು ಮಾಹಿತಿಗಾಗಿ :**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು (ಪಂ.ರಾಜ್), ಗ್ರಾ.ಅ.ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
3. ನಿರ್ದೇಶಕರು (ಪಂ.ರಾಜ್-2), ಗ್ರಾ.ಅ.ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕ, ಬಹುಮಹಡಿಗಳ ಕಟ್ಟಡ, ಬೆಂಗಳೂರು.

ಅನುಬಂಧ-1

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 182 ಜಿಪಸ 2014(ಪಿ-2), ಬೆಂಗಳೂರು, ದಿನಾಂಕ: 27-11-2014.**

| ಕ್ರ.ಸಂ. | ಜಿಲ್ಲೆಗಳ ಹೆಸರು | ಅನುದಾನದ ಮೊತ್ತ |
|---|---|---|
| 1 | ಕಲ್ಬುರ್ಗಿ (ಗುಲ್ಬರ್ಗಾ) | 100.00 ಲಕ್ಷ |
| 2 | ಬೆಳಗಾವಿ | 100.00 ಲಕ್ಷ |
| 3 | ಚಿಕ್ಕಬಳ್ಳಾಪುರ | 100.00 ಲಕ್ಷ |
| 4 | ದಕ್ಷಿಣ ಕನ್ನಡ | 100.00 ಲಕ್ಷ |
| 5 | ಹಾವೇರಿ | 100.00 ಲಕ್ಷ |
| 6 | ರಾಮನಗರ | 100.00 ಲಕ್ಷ |
| 7 | ಕೊಡಗು | 100.00 ಲಕ್ಷ |
| 8 | ಬೆಂಗಳೂರು ನಗರ | 50.00 ಲಕ್ಷ |
| 9 | ಕೋಲಾರ | 50.00 ಲಕ್ಷ |
| 10 | ಮೈಸೂರು | 50.00 ಲಕ್ಷ |
| 11 | ಉಡುಪಿ | 50.00 ಲಕ್ಷ |
| 12 | ಚಾಮರಾಜನಗರ | 50.00 ಲಕ್ಷ |
| 13 | ಗದಗ | 50.00 ಲಕ್ಷ |
| 14 | ಉತ್ತರ ಕನ್ನಡ | 50.00 ಲಕ್ಷ |
| 15 | ವಿಜಯಾಪುರ (ಬಿಜಾಪುರ) | 50.00 ಲಕ್ಷ |
| 16 | ಬಾಗಲಕೋಟೆ | 50.00 ಲಕ್ಷ |
| 17 | ಶಿವಮೊಗ್ಗ | 50.00 ಲಕ್ಷ |
| 18 | ದಾವಣಗೆರೆ | 50.00 ಲಕ್ಷ |
| 19 | ಚಿತ್ರದುರ್ಗ | 50.00 ಲಕ್ಷ |
| 20 | ಬೀದರ | 50.00 ಲಕ್ಷ |
| 21 | ಬಳ್ಳಾರಿ | 50.00 ಲಕ್ಷ |
| 22 | ಚಿಕ್ಕಮಗಳೂರು | 50.00 ಲಕ್ಷ |
| 23 | ಯಾದಗಿರಿ | 50.00 ಲಕ್ಷ |
| | **ಒಟ್ಟು** | **1500.00 ಲಕ್ಷ** |

Under Secy. to Govt. (ZP)
Rural Devt. & Pan. Raj. Dept.